ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ದಿನಾಂಕ : DATE: 21/2/21

# ಐಎಂಎ ವಂಚಕನಿಂದ ಸಿದ್ದು ಆಪ್ತಗೆ ₹5 ಕೋಟಿ!

## ತನಿಖಾ ಸಂಸ್ಥೆಗೆ ಐಎಂಎ ಮಾಲೀಕ ಮನ್ಸೂರ್ ಆಪ್ತ ನೀಡಿದ್ದೆನ್ನಲಾದ ಹೇಳಿಕೆ ಬಹಿರಂಗ

## ಪ್ರತಿಪಕ್ಷ ನಾಯಕ ಸ್ಥಾನಕ್ಕೆ ಸಿದ್ದರಾಮಯ್ಯ ರಾಜೀನಾಮೆ ನೀಡಬೇಕು: ಬಿಜೆಪಿ ಪಟ್ಟು

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ಬಹುಕೋಟಿ ವಂಚನೆ ಆರೋಪ ಹೊತ್ತಿರುವ ಐ ಮಾನಿಟರಿ ಅಡ್ವೈಸರಿ (ಐಎಂಎ) ಕಂಪನಿಯ ಮಾಲಿಕ ಮಹಮ್ಮದ್ ಮನ್ಸೂರ್ ಖಾನ್ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಸೇರಿದಂತೆ ನಾಡಿನ ಹಲವು ಪ್ರಮುಖ ರಾಜಕೀಯ ನೇತಾರರಿಗೆ ಕೋಟಿಗಟ್ಟಲೆ ಹಣ ನೀಡಿದ್ದ ಎಂಬ ಆರೋಪ ಮತ್ತೆ ಕೇಳಿಬಂದಿದ್ದು, ಈ ಹಿನ್ನೆಲೆಯಲ್ಲಿ ಪ್ರತಿಪಕ್ಷ ನಾಯಕನ ಸ್ಥಾನಕ್ಕೆ ರಾಜೀನಾಮೆ ನೀಡುವಂತೆ ಬಿಜೆಪಿ ನಾಯಕರು ಸಿದ್ದರಾಮಯ್ಯ ಅವರನ್ನು ಆಗ್ರಹಿಸಿದ್ದಾರೆ.

ಸಿದ್ದರಾಮಯ್ಯ ವಿರುದ್ಧ ಆರೋಪ ಕೇಳಿಬಂದ ಬೆನ್ನಲ್ಲೇ ಈ ಬಗ್ಗೆ ಟ್ವೀಟ್ ಮಾಡಿರುವ ರಾಜ್ಯ ಬಿಜೆಪಿ ಪ್ರಧಾನ ಕಾರ್ಯದರ್ಶಿ ಎನ್.ರವಿಕುಮಾರ್, ನೈತಿಕ ಹೊಣೆ ಹೊತ್ತು ವಿರೋಧ ಪಕ್ಷದ ನಾಯಕ ಸ್ಥಾನಕ್ಕೆ ಸಿದ್ದರಾಮಯ್ಯ ರಾಜೀನಾಮೆ ನೀಡಬೇಕು ಆಗ್ರಹಿಸಿದರೆ, ಧಾರವಾಡದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಈ ಆರೋಪಕ್ಕೆ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಉತ್ತರಿಸಲಿ ಎಂದು ಒತ್ತಾಯಿಸಿದ್ದಾರೆ.

ಈ ಹಣಕಾಸು ವ್ಯವಹಾರ ಸಂಬಂಧ ತನಿಖಾ ಸಂಸ್ಥೆಗಳಿಗೆ ವಂಚನೆ ಪ್ರಕರಣದ ಪ್ರಮುಖ ಆರೋಪಿ




ಹಾಗೂ ಐಎಂಎ ಮಾಲಿಕನ ಆಪ್ತ ನಿಜಾಮುದ್ದೀನ್ ನೀಡಿದ್ದಾನೆ ಎನ್ನಲಾದ ಹೇಳಿಕೆಯ ಪ್ರತಿ ಬಹಿರಂಗವಾಗಿದ್ದು, ಅದರಲ್ಲಿ ವಂಚಕ ಮನ್ಸೂರ್‌ನ 'ಫಲಾನುಭವಿಗಳ' ಪಟ್ಟಿ ಬಯಲಾಗಿದೆ. ಮಾಜಿ ಮುಖ್ಯಮಂತ್ರಿಗಳು, ಮಾಜಿ ಉಪಮುಖ್ಯಮಂತ್ರಿ ಹಾಗೂ ಮಾಜಿ ಸಚಿವರು ನೇರವಾಗಿ ಮನ್ಸೂರ್ ಬಂಟನಿಂದ ಹಣ ಸ್ವೀಕರಿಸಿರುವುದಕ್ಕೆ ಸಾಕ್ಷ್ಯಗಳಿಲ್ಲ. ಆದರೆ, ಈ ನಾಯಕರ ಆಪ್ತರು ಪಡೆದಿದ್ದಾರೆ ಎಂದು ಆರೋಪಿಸಲಾಗಿದೆ.

2018ರ ವಿಧಾನಸಭೆ ಹಾಗೂ 2019ರ ಲೋಕಸಭೆ ಚುನಾವಣೆ ಸಂದರ್ಭದಲ್ಲಿ ಎಲೆಕ್ಷನ್ ಫಂಡಿಂಗ್ ಹೆಸರಿನಲ್ಲಿ ಮನ್ಸೂರ್‌ನಿಂದ ರಾಜಕಾರಣಿಗಳು ಹಣ ಸುಲಿಗೆ ಮಾಡಿದ್ದಾರೆ ಎನ್ನಲಾಗಿದೆ. ರಿಚ್ಮಂಡ್ ಟೌನ್ ಸಮೀಪ ಸಿದ್ದರಾಮಯ್ಯ ಅವರ ಆಪ್ತನಿಗೆ ₹5 ಕೋಟಿ ನೀಡಲಾಗಿತ್ತು. ಮಾಜಿ ಮುಖ್ಯಮಂತ್ರಿ ಕುಮಾರಸ್ವಾಮಿ ಅವರು, ಮಾಜಿ ಸಚಿವ ರೋಷನ್ ಬೇಗ್ ಆಪ್ತ ಸಹಾಯಕ ಕೃಷ್ಣೇಗೌಡ ಮೂಲಕ ಹಣ ಪಡೆದಿದ್ದರು. ಸದಾಶಿವನಗರದಲ್ಲಿರುವ ಕೃಷ್ಣೇಗೌಡನ ಮನೆಗೆ ತೆರಳಿ ನಿಜಾಮುದ್ದೀನ್ ಹಣ ಕೊಟ್ಟು ಬಂದಿದ್ದ. ಆದರೆ ನೇರವಾಗಿ ಕುಮಾರಸ್ವಾಮಿ ಅವರಿಗೆ ಹಣ ಕೊಟ್ಟಿಲ್ಲ. ರೋಷನ್ ಬೇಗ್ ಸೂಚನೆ ಮೇರೆಗೆ ಹಣ ಸಂದಾಯವಾಗಿತ್ತು ಎಂದು ದೂರಲಾಗಿದೆ.

ಈ ಬಗ್ಗೆ ಮಾಧ್ಯಮಗಳಲ್ಲಿ ವರದಿಯಾದ ಬೆನ್ನಲ್ಲೇ ಟ್ವೀಟ್ ಮಾಡಿರುವ ಬಿಜೆಪಿ ಪ್ರಧಾನ ಕಾರ್ಯದರ್ಶಿ ಎನ್.ರವಿಕುಮಾರ್, ಐಎಂಎ ಹಗರಣದಲ್ಲಿ ಕಾಂಗ್ರೆಸ್ ನಾಯಕರು ಭಾಗಿಯಾದ ಬಗ್ಗೆ ಮಾಧ್ಯಮಗಳು ವರದಿ ಮಾಡಿವೆ. ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ 5 ಕೋಟಿ ಸಂದಾಯವಾಗಿದೆ ಎಂದು ವರದಿಗಳು ಹೇಳುತ್ತಿವೆ. ಈ ಕ್ಷಣದಲ್ಲೇ ವಿಪಕ್ಷ ನಾಯಕ ಸ್ಥಾನಕ್ಕೆ ಅವರು ರಾಜೀನಾಮೆ ನೀಡಬೇಕು ಎಂದು ಆಗ್ರಹಿಸಿದ್ದಾರೆ.